ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಮರಳು ನೀತಿಯ ಮಾಹಿತಿ ಕುರಿತು

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

515 (599) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮರಳಿಗೆ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಭಾವವನ್ನು ನೀಗಿಸಲು ಮರಳು ನೀತಿಯನ್ನು ಜಾರಿಗೆ ತರಲಾಗಿದೆಯೇ ;

(ಇ) ಸದರಿ ನೀತಿಯ ರೂಪುರೇಷೆಗಳೇನು ; (ವಿವರ ನೀಡುವುದು)

(ಈ) ಸದರಿ ಮರಳು ನೀತಿಯಿಂದ ಸರ್ಕಾರದ ಯೋಜನೆಯ ಫಲಾನುಭವ ಪಡೆದು, ನಿವೇಶನಗಳಲ್ಲಿ ಮನೆ ನಿರ್ಮಾಣ ಮಾಡುವವರಿಗೆ ಯಾವುದಾದರೂ ರಿಯಾಯಿತಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ;

(ಉ) ಖಾಸಗಿಯವರನ್ನು ಹೊರತುಪಡಿಸಿ, ಸರ್ಕಾರದ ಇಲಾಖಾ ವತಿಯಿಂದ ಕಡಿಮೆ ಮೊತ್ತದಲ್ಲಿ ಮರಳು ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?